ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 3/1/2020

# ಗೌರ್ನರ್ ಭಾಷಣಕ್ಕೆ ಅಡ್ಡಿಪಡಿಸಿದರೆ ಸಸ್ಪೆಂಡ್

## ಮೇಲ್ಮನೆ ಸದಸ್ಯರಿಗೆ ವಿಧಾನ ಪರಿಷತ್ ಕಾರ್ಯದರ್ಶಿ ಎಚ್ಚರಿಕೆ ಆದೇಶ | ವಿಪಕ್ಷಗಳಿಂದ ಕಿಡಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮುಂದಿನ ತಿಂಗಳು ನಡೆಯುವ ಜಂಟಿ ಅಧಿವೇಶನದ ವೇಳೆ ರಾಜ್ಯಪಾಲರ ಭಾಷಣಕ್ಕೆ ಅಡ್ಡಿಪಡಿಸುವ ಅಥವಾ ಕ್ರಿಯಾಲೋಪ ಎತ್ತುವ ಮೇಲ್ಮನೆ ಸದಸ್ಯರನ್ನು ಅಮಾನತುಪಡಿಸಲಾಗುವುದು ಎಂದು ವಿಧಾನಪರಿಷತ್ ಕಾರ್ಯದರ್ಶಿ ಹೊರಡಿಸಿರುವ ಆದೇಶವು ಇದೀಗ ಚರ್ಚೆಗೆ ಗ್ರಾಸವಾಗಿದೆ.

ಪರಿಷತ್‌ನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಾವಳಿಗಳ ನಿಯಮ 16ರ ಪ್ರಕಾರ ರಾಜ್ಯಪಾಲರು ಬರುವ ವೇಳೆ ಅಥವಾ ಹೊರಡುವ ವೇಳೆ ಹಾಗೂ ಭಾಷಣದ ಅವಧಿಯಲ್ಲಿ ಸದಸ್ಯರು ಅಡ್ಡಿಯನ್ನುಂಟು ಮಾಡಬಾರದು. ಒಂದು ವೇಳೆ ಅಡ್ಡಿಯನ್ನುಂಟು ಮಾಡಿದರೆ ಸದನದ ಆದೇಶ ಉಲ್ಲಂಘನೆ ಮತ್ತು ರಾಜ್ಯಪಾಲರಿಗೆ ತೋರಿದ ಅಗೌರವವೆಂದು ಪರಿಗಣಿಸಲಾಗುತ್ತದೆ. ಸದಸ್ಯರು ಸದನದಲ್ಲಿ ಮಂಡಿಸಬಹುದಾದ ಪ್ರಸ್ತಾವದ ಮೇರೆಗೆ ಅಧಿವೇಶನ ಗೊತ್ತುಪಡಿಸಿದ ಅವಧಿಗೆ ಅಥವಾ ಉಳಿದ ಅವಧಿಗೆ ಅಮಾನತುಗೊಳಿಸಲಾಗುವುದು ಎಂದು ತಿಳಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಪಕ್ಷದ ನಾಯಕರು, ಇದು ಶಾಸಕರ ಹಕ್ಕುಗಳನ್ನು ಕಿತ್ತುಕೊಳ್ಳುವ ಯತ್ನ ಎಂದು ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

## ಪ್ರಜಾಪ್ರಭುತ್ವದ ಕಗ್ಗೊಲೆ: ಸಿದ್ದು ಕೆಂಡಾಮಂಡಲ



ಬೆಂಗಳೂರು: ರಾಜ್ಯ ವಿಧಾನಮಂಡಲದ ಜಂಟಿ ಸದನದಲ್ಲಿ ರಾಜ್ಯಪಾಲರ ಭಾಷಣದ ವೇಳೆ ಸದಸ್ಯರು ಮಾತನಾಡಿದರೆ ಅಮಾನತು ಮಾಡುವುದಾಗಿ ವಿಧಾನಪರಿಷತ್ ಸಚಿವಾಲಯ ಸುತ್ತೋಲೆ ಹೊರಡಿಸಿರುವುದಕ್ಕೆ ಕಾಂಗ್ರೆಸ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಸದನದಲ್ಲಿ ಸದಸ್ಯರ ಅಭಿವ್ಯಕ್ತಿ ಸ್ವಾತಂತ್ರ್ಯ ಹತ್ತಿಕ್ಕುವ ಪ್ರಯತ್ನ ನಡೆದರೆ ಅದರ ವಿರುದ್ಧ ಗಂಭೀರ ಹೋರಾಟ ಮಾಡುವ ಎಚ್ಚರಿಕೆ ನೀಡಿದೆ.

ಈ ಬಗ್ಗೆ ಗುರುವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು, ಇಂತಹದೊಂದು ಸುತ್ತೋಲೆ ಹೊರಡಿಸಿರುವುದು ಸ್ಪೀಕರ್ ಅವರ ಹಿಟ್ಲರ್ ಧೋರಣೆಯನ್ನು ತೋರಿಸುತ್ತದೆ. ಇದು ಪ್ರಜಾಪ್ರಭುತ್ವದ ಕಗ್ಗೊಲೆ. ಇದಕ್ಕೆ ಅವಕಾಶ ನೀಡುವುದಿಲ್ಲ. ವಿಧಾನಸಭಾಧ್ಯಕ್ಷ ಮತ್ತು ವಿಧಾನಪರಿಷತ್ ಸಭಾಪತಿ ಅವರಿಗೆ ಸದಸ್ಯರ ಅಭಿವ್ಯಕ್ತಿ ಸ್ವಾತಂತ್ರ್ಯ ಹತ್ತಿಕ್ಕುವ ಅಧಿಕಾರ ಇಲ್ಲ. ಇಂತಹ ಸುತ್ತೋಲೆ ಹೊರಡಿಸುವ ಅಧಿಕಾರವೂ ಅವರಿಗೆ ಇಲ್ಲ ಎಂದಿದ್ದಾರೆ.

ಆದರೆ, ವಿಧಾನಪರಿಷತ್‌ನ ನಿಯಮಾವಳಿ ಪುಸ್ತಕದಲ್ಲಿಯೇ ಈ ಬಗ್ಗೆ ಉಲ್ಲೇಖ ಇದೆ. ಹೊಸದಾಗಿ ಯಾವುದೇ ಆದೇಶವನ್ನು ಹೊರಡಿಸಿಲ್ಲ. ಪ್ರತಿಬಾರಿಯೂ ಇದೇ ರೀತಿಯ ಸೂಚನೆಯನ್ನು ನೀಡಲಾಗುತ್ತದೆ. ಇದರಲ್ಲಿ ಯಾವುದೇ ವಿಶೇಷತೆ ಇಲ್ಲ. ಮಾಧ್ಯಮಗಳು ತಪ್ಪಾಗಿ ಅರ್ಥೈಸಿಕೊಂಡು ವರದಿ ಬಿತ್ತರಿಸುತ್ತಿವೆ ಎಂದು ವಿಧಾನಪರಿಷತ್ ಸಚಿವಾಲಯವು ಸ್ಪಷ್ಟಪಡಿಸಿದೆ.

**ವಿಧಾನಸಭೆಗೆ ಅನ್ವಯ ಇಲ್ಲ:** ಇದೇ ವೇಳೆ ವಿಧಾನಸಭೆಯ ನಿಯಮಾವಳಿಯಲ್ಲಿ ಇಂತಹ ಉಲ್ಲೇಖ ಇಲ್ಲ. ಕೇವಲ ರಾಜ್ಯಪಾಲರ ಭಾಷಣಕ್ಕೆ ಸದಸ್ಯರು ಅಡ್ಡಿಪಡಿಸಬಾರದು ಮತ್ತು ಅಗೌರವ ತೋರಬಾರದು ಎಂದಷ್ಟೇ ಇದೆ. ಹೀಗಾಗಿ ವಿಧಾನ ಪರಿಷತ್‌ನ ಆದೇಶಕ್ಕೂ ವಿಧಾನಸಭೆಗೂ ಯಾವುದೇ ಸಂಬಂಧ ಇಲ್ಲ ಎಂದು ವಿಧಾನಸಭಾ ಸಚಿವಾಲಯವು ತಿಳಿಸಿದೆ.